ಕರ್ನಾಟಕ ಸರ್ಕಾರ
(ಕಂದಾಯ ಇಲಾಖೆ)

# ಜಿಲ್ಲಾಧಿಕಾರಿಗಳ ಕಾರ್ಯಾಲಯ

ಚಾಮರಾಜನಗರ ಜಿಲ್ಲೆ, ಚಾಮರಾಜನಗರ.

☎ 08226-223160
08226-223170
Fax: 08226-223180

ಸಂ:ಸಿಬ್ಬಂದಿ(1):ಸಿಆರ್:44/2016-17 ದಿನಾಂಕ: 16 -01-2018

## ಅಧಿಕೃತ ಜ್ಞಾಪನ

ವಿಷಯ: 2016-17ನೇ ಸಾಲಿನಲ್ಲಿ ಚಾಮರಾಜನಗರ ಜಿಲ್ಲಾ ಕಂದಾಯ ಘಟಕದ ತಾಲ್ಲೂಕು ಕಛೇರಿಗಳಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಸಂಬಂಧ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ.

ಉಲ್ಲೇಖ:1) ಈ ಕಛೇರಿಯ ಸಮಸಂಖ್ಯೆ ಅಧಿಸೂಚನೆ ದಿನಾಂಕ: 22-10-2016

2) ಈ ಕಛೇರಿಯ ಸಮಸಂಖ್ಯೆ ಪರಿಷ್ಕೃತ ಅಧಿಸೂಚನೆ ದಿನಾಂಕ: 01-12-2016 ಮತ್ತು 03-12-2016.

3) ಈ ಕಛೇರಿಯ ಸಮಸಂಖ್ಯೆ ಅಧಿಕೃತ ಜ್ಞಾಪನ ಪತ್ರದ ದಿನಾಂಕ: 18-01-2017

4) ಗ್ರಾಮಲೆಕ್ಕಿಗರ ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ ಸಮಿತಿಯ ನಡವಳಿ ದಿನಾಂಕ:26-08-2017 ಮತ್ತು 8-11-2017

5) ಈ ಕಛೇರಿಯ ಸಮಸಂಖ್ಯೆ ಅಧಿಕೃತ ಜ್ಞಾಪನಾ ಪತ್ರ ದಿನಾಂಕ: 06-12-2017

ಚಾಮರಾಜನಗರ ಜಿಲ್ಲಾ ಕಂದಾಯ ಘಟಕದ ವಿವಿಧ ತಾಲ್ಲೂಕು ಕಛೇರಿಗಳಲ್ಲಿ ಗ್ರೂಪ್ ಸಿ ವೃಂದದ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು, ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಉಲ್ಲೇಖ(1)&(2)ರ ಅಧಿಸೂಚನೆಯಂತೆ ಆಹ್ವಾನಿಸಲಾಗಿದ್ದು, ಅರ್ಜಿ ಸ್ವೀಕರಿಸುವ ಪ್ರಕ್ರಿಯೆ ದಿನಾಂಕ:15-12-2016 ರಂದು ಮುಕ್ತಾಯಗೊಂಡಿರುತ್ತದೆ.

ಗಾಮಲೆಕ್ಕಿಗರ ಹುದ್ದೆಯ ನೇರ ನೇಮಕಾತಿಯ ಸಂಬಂಧ ಒಟ್ಟು 6610 ಅರ್ಜಿಗಳು ಸ್ವೀಕೃತವಾಗಿದ್ದು, ಅದರಲ್ಲಿ ಆನ್‌ಲೈನ್‌ನಲ್ಲಿ ಭರ್ತಿ ಮಾಡಿ ಸ್ಟೇಟ್ ಬ್ಯಾಂಕ್ ಆಫ್ ಮೈಸೂರಿನ ಯಾವುದಾದರೂ ಶಾಖೆಯಲ್ಲಿ ಶುಲ್ಕ ಪಾವತಿ ಮಾಡಿರುವ ಹಾಗೂ ಚಲನ್ ನನ್ನು ಅಪ್‌ಲೋಡ್ ಮಾಡಿರುವ ಒಟ್ಟು 3870 ಅಭ್ಯರ್ಥಿಗಳ ಅರ್ಜಿಗಳನ್ನು ಪರಿಗಣಿಸಿ ಒಟ್ಟು ಖಾಲಿ ಇರುವ 47 ಹುದ್ದೆಗಳಿಗೆ ಅಭ್ಯರ್ಥಿಗಳ ಗಳಿಸಿರುವ ಅಂಕಗಳ ಶೇಕಡವಾರು ಮೆರಿಟ್ ಆಧಾರದ ಮೇಲೆ 1 : 5 ಅನುಪಾತದಲ್ಲಿ ತಾತ್ಕಾಲಿಕ ಪರಿಶೀಲನಾ ಪಟ್ಟಿಯನ್ನು ಉಲ್ಲೇಖ(3)ರಲ್ಲಿ ಪ್ರಕಟಿಸಲಾಗಿದ್ದು, ಸದರಿ ತಾತ್ಕಾಲಿಕ ಪರಿಶೀಲನಾ ಪಟ್ಟಿಗೆ ಸಂಬಂಧಪಟ್ಟಂತೆ ಯಾವುದಾದರೂ ಆಕ್ಷೇಪಣೆಗಳು ಇದ್ದಲ್ಲಿ ಅಭ್ಯರ್ಥಿಗಳು ಲಿಖಿತ ರೂಪದಲ್ಲಿ ದಿನಾಂಕ: 02-02-2017 ಸಂಜೆ 5-30 ರ ಒಳಗೆ ಸಲ್ಲಿಸತಕ್ಕದ್ದು ಈ ದಿನಾಂಕದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲವೆಂದು ಸ್ಪಷ್ಟವಾಗಿ ತಿಳಿಸಲಾಗಿತ್ತು. ಅಲ್ಲದೆ ಪರಿಶೀಲನಾ ಪಟ್ಟಿಯಲ್ಲಿರುವ ಅಭ್ಯರ್ಥಿಗಳು ದಿನಾಂಕ:16-02-2017 ಮತ್ತು 17-02-2017 ರಂದು ಖುದ್ದು ಹಾಜರಾಗಿ ಮೂಲ ದಾಖಲಾತಿಗಳನ್ನು ಮತ್ತು ದೃಡೀಕೃತ ದಾಖಲಾತಿಗಳನ್ನು ಪರಿಶೀಲನೆಗೆ ಹಾಜರುಪಡಿಸುವಂತೆ ತಿಳಿಸಲಾಗಿತ್ತು, ಅದರಂತೆ ಸದರಿ ದಿನಾಂಕಗಳಂದು ಅಭ್ಯರ್ಥಿಗಳು ಮೂಲ ದಾಖಲಾತಿಗಳು ಮತ್ತು ದೃಡೀಕೃತ ದಾಖಲಾತಿಗಳನ್ನು ಪರಿಶೀಲನೆಗೆ ಹಾಜರುಪಡಿಸಿರುತ್ತಾರೆ.

-2